ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/09/ಇಸಿಎಸ್(2)/2017

ಕಾರ್ಯದರ್ಶಿಯವರ ಕಛೇರಿ
ತಾಂತ್ರಿಕ ಪರೀಕ್ಷಾ ಮಂಡಳಿ
ಅರಮನೆ ರಸ್ತೆ, ಬೆಂಗಳೂರು-01
ದಿನಾಂಕ: 03.08.2019.

**ಹಿಂಬರಹ**

ವಿಷಯ : 2009-10 ಮತ್ತು 2010-11 ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ 1ನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12, 2012-13 ಮತ್ತು 2013-14 ನೇ ಸಾಲಿನಲ್ಲಿ ಡಿಪ್ಲೊಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ 2ನೇ ವರ್ಷಕ್ಕೆ ಪ್ರವೇಶ ಪಡೆದ ಐಟಿಐ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ವಿಸ್ತರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 76 ಟಿಪಿಇ 2019, ದಿನಾಂಕ: 02.08.2019.

*-*-*-*

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಪತ್ರದ ಅನ್ವಯ **"2009-10 ಮತ್ತು 2010-11 ರ ಶೈಕ್ಷಣಿಕ ಸಾಲಿನಲ್ಲಿ ವಿವಿಧ ಡಿಪ್ಲೊಮಾ ಕೋರ್ಸುಗಳಿಗೆ ಮೊದಲನೇ ವರ್ಷಕ್ಕೆ ಪ್ರವೇಶ ಪಡೆದ ಹಾಗೂ 2011-12, 2012-13 ಮತ್ತು 2013-14 ನೇ ಸಾಲಿನ ಡಿಪ್ಲೊಮಾ ಕೋರ್ಸುಗಳಿಗೆ ಲ್ಯಾಟರಲ್ ಎಂಟ್ರಿ ಮುಖಾಂತರ ಪ್ರವೇಶಾತಿಯನ್ನು ಪಡೆದ ಐಟಿಐ ವಿದ್ಯಾರ್ಥಿಗಳು ಅನುತ್ತೀರ್ಣರಾಗಿರುವ ಕಾರಣ, ಸದರಿ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯವು ಅಂತ್ಯವಾಗಬಾರದೆಂಬ ಉದ್ದೇಶದ ಮೇರೆಗೆ ಕೊನೆಯ ಬಾರಿಗೆ ಈ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ 2019 ರ ಅಕ್ಟೋಬರ್/ನವೆಂಬರ್ ಸೆಮಿಸ್ಟರ್ ಪರೀಕ್ಷೆ ಮತ್ತು 2020 ರ ಮಾರ್ಚ್/ಏಪ್ರಿಲ್ ಸೆಮಿಸ್ಟರ್ ಪರೀಕ್ಷೆಯನ್ನು ಬರೆಯಲು ಅನುಮತಿ ನೀಡಲಾಗಿದೆ"**.

ಪ್ರಯುಕ್ತ ಮೇಲೆ ತಿಳಿಸಲಾದ ವಿದ್ಯಾರ್ಥಿಗಳಿಗೆ **2019 ರ ಅಕ್ಟೋಬರ್/ನವೆಂಬರ್ ಸೆಮಿಸ್ಟರ್ ಪರೀಕ್ಷೆಗೆ ದಿನಾಂಕ: 10.08.2019 ರವರೆಗೆ ದಂಡ ರಹಿತವಾಗಿ ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಲಾಗಿದೆ.**

03/08/19
ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ: ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳಿಗೆ – ಮುಂದಿನ ಕ್ರಮಕ್ಕಾಗಿ.

**ಪ್ರತಿ:** ಇ-ಆಡಳಿತ – ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು